# ಕರ್ನಾಟಕ ವಿಧಾನ ಪರಿಷತ್ತು

1. ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ,
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 123
3. ಉತ್ತರಿಸಬೇಕಾದ ದಿನಾಂಕ : 19.12.2022
4. ಉತ್ತರಿಸುವ ಸಚಿವರು: : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ತುಮಕೂರು ಜಿಲ್ಲೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದಾಗಿ ತಾಯಿ ಮತ್ತು ಇಬ್ಬರು ಅವಳಿ ಮಕ್ಕಳು ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸದರಿ ವೈದ್ಯರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು: | ಸರ್ಕಾರದ ಗಮನಕ್ಕೆ ಬಂದಿದೆ. ಸದರಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ವೈದ್ಯರು ಮತ್ತು ಶುಶ್ರೂಶಾಧಿಕಾರಿಯನ್ನು ಇಲಾಖಾ ವಿಚಾರಣೆ ಬಾಕಿ ಇರಿಸಿ ಅಮಾನತ್ತುಗೊಳಿಸಲಾಗಿದೆ.<br>ಈ ಪ್ರಕರಣದ ಸತ್ಯಾಸತ್ಯತೆ ತಿಳಿಯುವ ಸಲುವಾಗಿ ಶ್ರೀ ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ, ಒಂದು ತಿಂಗಳೊಳಗಾಗಿ ವರದಿ ಸಲ್ಲಿಸಲು ಆದೇಶಿಸಲಾಗಿದೆ. ವಿಚಾರಣಾ ವರದಿ ಬಂದ ನಂತರ ತಪ್ಪಿಸ್ಥರ ವಿರುದ್ಧ ನಿಯಮಾನುಸಾರ ಕ್ರಮ ತೆಗೆದು ಕೊಳ್ಳಲಾಗುವುದು. |
| ಆ | ತುರ್ತು ಸಮಯದಲ್ಲಿ ತಾಯಿ ಕಾರ್ಡ್ ಆಧಾರ್ ಕಾರ್ಡ್ ಮುಂತಾದ ದಾಖಲೆಗಳಿಗೆ ಒತ್ತಾಯಿಸದೆ ಚಿಕಿತ್ಸೆ ನೀಡಲು ವೈದ್ಯರಿಗೆ ಸರ್ಕಾರ ಆದೇಶ ಮಾಡಿದೆಯೇ: (ಆದೇಶದ ಪ್ರತಿಯನ್ನು ನೀಡುವುದು) | ತುರ್ತು ಸಮಯದಲ್ಲಿ ತಾಯಿ ಕಾರ್ಡ್, ಆಧಾರ್ ಕಾರ್ಡ್ ಮುಂತಾದ ದಾಖಲೆಗಳಿಗೆ ಒತ್ತಾಯಿಸದೇ ಚಿಕಿತ್ಸೆ ನೀಡಲು ಸುತ್ತೋಲೆ ಹೊರಡಿಸಲಾಗಿದೆ , (ಪ್ರತಿ ಲಗತ್ತಿಸಿದೆ). |
| ಇ | ಬೆಳಗಾವಿಯ ಮಕ್ಕಳ ಲಸಿಕಾ ದುರಂತ ಮತ್ತು ತುಮಕೂರಿನ ವೈದ್ಯರ ನಿರ್ಲಕ್ಷ್ಯ ಇಂತಹ ಘಟನೆಗಳ ಮುಂದೆ ಸಂಭವಿಸದಂತೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? | ಬೆಳಗಾವಿಯ ಮಕ್ಕಳ ಲಸಿಕಾ ದುರಂತದಂತಹ ಘಟನೆಗಳು ಮುಂದೆ ಸಂಭವಿಸದಂತೆ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ:-<br>**ಆಡಳಿತಾತ್ಮಕ ಕ್ರಮಗಳು:**<br>• ರಾಜ್ಯ ಮಟ್ಟದಿಂದ ವಿಭಾಗೀಯ ಜಂಟಿ ನಿರ್ದೇಶಕರು, ಬೆಳಗಾವಿ ಜಿಲ್ಲೆರವರನ್ನು ಪ್ರಧಾನ ತನಿಖಾಧಿಕಾರಿಯಾಗಿ ನೇಮಿಸಿ **SMO – WHO** ರವರ ತಾಂತ್ರಿಕ ಸಲಹೆ ಮೇರೆಗೆ ತನಿಖೆ ನಡೆಸಲು ತಿಳಿಸಲಾಗಿದೆ.<br>• ತನಿಖಾ ವರದಿ ಮೇರೆಗೆ **PHCO**, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ಫಾರ್ಮಸಿಸ್ಟ್ ಅಧಿಕಾರಿಯನ್ನು ಅಮಾನತ್ತುಗೊಳಿಸಲಾಗಿದೆ.<br>• ತದನಂತರ, ಸದರಿಯವರ ವರದಿಯನ್ನು ಪರಿಶೀಲಿಸಿ, ಇಲಾಖಾ ತನಿಖೆಯನ್ನು ಬಾಕಿ ಇರಿಸಿ ಕರ್ತವಕ್ಕೆ ಹಾಜರಾಗಲು ತಿಳಿಸಲಾಗಿದೆ.<br>**ಕಾರ್ಯಕ್ರಮಾಧಾರಿತ ಕ್ರಮಗಳು:**<br>• ಭಾರತ ಸರ್ಕಾರದ ಮಾರ್ಗಸೂಚಿಯಂತೆ ತಕ್ಷಣವೇ ದಿನಾಂಕ: 14/01/2022ರಂದು ಜಿಲ್ಲಾಮಟ್ಟದ **AEFI** ಸಮಿತಿ ಸಭೆಯನ್ನು ನಡೆಸಲಾಯಿತು.<br>• ದಿನಾಂಕ: 25/01/2022ರಂದು ರಾಜ್ಯಮಟ್ಟದ **AEFI Causality Assessment** ಸಭೆಯನ್ನು ನಡೆಸಲಾಯಿತು. |

| | | |
|---|---|---|
| | | • ಎಲ್ಲಾ ಜಿಲ್ಲೆಗಳಿಗೂ ರಾಜ್ಯಮಟ್ಟದಿಂದ ಸಾರ್ವತ್ರಿಕ ಲಸಿಕಾ ಕಾರಣದ ವ್ಯವಸ್ಥಿತ ನಿರ್ವಹಣೆಯ **SOP**, ಗಳ ಅನುಪಾಲನೆ, **AEFI** ಗಳ ಗುರುತಿಸುವಿಕೆ ಮತ್ತು ನಿರ್ವಹಣೆ ಹಾಗೂ ಶೀತಲ ಸರಪಣಿ ವ್ಯವಸ್ಥೆ ಕುರಿತು ಸವಿಸ್ತಾರವಾಗಿ ತರಬೇತಿ ನೀಡಲಾಯಿತು.<br><br>• ಜಿಲ್ಲಾಮಟ್ಟದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಮತ್ತು ಎಲ್ಲಾ ಆರೋಗ್ಯ ಕೇಂದ್ರ ವೈದ್ಯಾಧಿಕಾರಿಗಳಿಗೆ **PHCO** ಮತ್ತು ಆಶಾ ಕಾರ್ಯಕರ್ತೆಯವರಿಗೆ ತರಬೇತಿ ನೀಡಲಾಯಿತು.<br><br>• ಯಾವುದೇ **AEFI** ವರದಿಯಾದರೆ ತಕ್ಷಣ ರಾಜ್ಯ ಮಟ್ಟಕ್ಕೆ ತಿಳಿಸಲು ಮತ್ತು ಸದರಿ ಪ್ರಕರಣವನ್ನು **SAFE-VAC** ಪೋರ್ಟಲ್‌ನಲ್ಲಿ ದಾಖಲಿಸಲು ತಿಳಿಸಲಾಗಿದೆ. ಅದರಂತೆ, ಜಿಲ್ಲೆಗಳಲ್ಲಿ ಕ್ರಮಕೈಗೊಳ್ಳಲಾಗುತ್ತಿದೆ.<br><br>• ಸಾರ್ವತ್ರಿಕ ಲಸಿಕಾ ಕಾರಣ ಮತ್ತು ಲಸಿಕಾ ಕಾರಣದ ನಂತರ ಸಂಭವಿಸಬಹುದಾದ ಅಡ್ಡಪರಿಣಾಮಗಳ ಕುರಿತ ಮೇಲ್ವಿಚಾರಣೆಯನ್ನು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ತೀವ್ರಗೊಳಿಸಲಾಗಿದೆ.<br><br>• ನಿಯಮಿತವಾಗಿ ಜಿಲ್ಲೆಗಳೊಂದಿಗೆ ನಡೆಯುವ ಸಭೆಗಳಲ್ಲಿ ಅಡ್ಡ ಪರಿಣಾಮಗಳ ವರದಿಯ ಕುರಿತು ಚರ್ಚಿಸಲಾಗುತ್ತಿದೆ.<br><br>**ತುಮಕೂರಿನ ವೈದ್ಯರ ನಿರ್ಲಕ್ಷ್ಯ ಇಂತಹ ಘಟನೆಗಳು ಮುಂದೆ ಸಂಭವಿಸದಂತೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು:**<br><br>• ತುರ್ತು ಪರಿಸ್ಥಿತಿಯಲ್ಲಿ ರೋಗಿಯ ನೋವು ಸಂಕಟ ನಿವಾರಿಸುವುದು.<br><br>• ತುರ್ತು ಪರಿಸ್ಥಿತಿಯಲ್ಲಿ ರೋಗಿಯ ಯಾವುದೇ ರೀತಿಯ ದಾಖಲೆಗಳನ್ನು ಒದಗಿಸಲು ಒತ್ತಾಯಿಸಬಾರದಾಗಿ ಸೂಚನೆ ನೀಡಿದೆ.<br><br>• ಇಂತಹ ಅಹಿತಕರ ಘಟನೆ ಮುಂದಿನ ದಿನಗಳಲ್ಲಿ ಮರುಕಳಿಸಿದಲ್ಲಿ ಸಂಬಂಧಪಟ್ಟ ವೈದ್ಯರು/ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಮತ್ತು ಸೇವೆಯಿಂದ ವಜಾಗೊಳಿಸಲಾಗುವುದೆಂದು ಹಾಗೂ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದು ಎಂದು ಎಚ್ಚರಿಕೆ ನೀಡಲಾಗಿರುತ್ತದೆ. |

**ಸಂಖ್ಯೆ:ಆಕುಕ 132 ಎಂಎಸ್‌ಎ 2022**

**(ಡಾ.ಕೆ. ಸುಧಾಕರ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**

# ಕರ್ನಾಟಕ ಸರ್ಕಾರ

ಸಂಖ್ಯೆ: HFW/860/HSH/2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ :23/11/2022.

## ಸುತ್ತೋಲೆ

**ವಿಷಯ:** ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತುರ್ತು ಆರೋಗ್ಯ ಸೇವೆ ಪಡೆಯುವ ಸಲುವಾಗಿ ದಾಖಲಾಗುವ ರೋಗಿಗಳ ಚಿಕಿತ್ಸೆ ಸಂದರ್ಭದಲ್ಲಿ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣಗಳಿಗಾಗಿ ಚಿಕಿತ್ಸೆಯನ್ನು ನೀಡಲು ನಿರಾಕರಿಸುವುದನ್ನು ತಡೆಗಟ್ಟುವ ಬಗ್ಗೆ - ಸೂಚನೆಗಳು.

******

ರಾಜ್ಯದ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತುರ್ತು ಆರೋಗ್ಯ ಸೇವೆ ನೀಡುವ ಸಮಯದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ/ಇತರೆ ಸಿಬ್ಬಂದಿಗಳು ಈ ಕೆಳಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಿದೆ.-

1. ರಾಜ್ಯವು ಸಾರ್ವಜನಿಕ ಆರೋಗ್ಯ ಪದ್ಧತಿಯಲ್ಲಿ ಇದುವರೆವಿಗೂ ರೋಗಿಗಳ ತಾಯಿ ಕಾರ್ಡ್, ಆಧಾರ್ ಕಾರ್ಡ್, ಪಡಿತರ ಚೀಟಿ ಇಲ್ಲದೆಯೂ ಆರೋಗ್ಯ ಸೇವೆಗಳನ್ನು ನೀಡುತ್ತಾ ಬಂದಿದ್ದು, ತುರ್ತು ಆರೋಗ್ಯ ಸೇವೆಗಾಗಿ ದಾಖಲಾಗುವ ಸಂದರ್ಭದಲ್ಲಿ ರೋಗಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣಕ್ಕಾಗಿ ಅವರನ್ನು ಚಿಕಿತ್ಸೆಗಾಗಿ ದಾಖಲಿಸಿಕೊಳ್ಳದೆ ನಿರಾಕರಿಸತಕ್ಕದ್ದಲ್ಲ.
2. ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಗಾಗಿ ದಾಖಲಾಗುವ ರೋಗಿಗೆ ಸಂಬಂಧಿಸಿದ ದಾಖಲೆಗಳು, ಅಂದರೆ ತಾಯಿಕಾರ್ಡ್, ಆಧಾರ್ ಕಾರ್ಡ್, ಪಡಿತರ ಚೀಟಿ ಇತರೆ ದಾಖಲೆಗಳನ್ನು ಒದಗಿಸದೇ ಇದ್ದರೂ, ರೋಗಿಯನ್ನು ದಾಖಲಿಸಿಕೊಂಡು ಆರೋಗ್ಯ ಸೇವೆಯನ್ನು ನೀಡುವುದು ಆಸ್ಪತ್ರೆಗಳ/ಆರೋಗ್ಯ ಕೇಂದ್ರಗಳ ಆದ್ಯ ಕರ್ತವ್ಯವಾಗಿರುತ್ತದೆ.
3. ಆರೋಗ್ಯ ಸೇವೆಯನ್ನು ನೀಡುವಾಗ ರೋಗಿಯ ರಾಷ್ಟ್ರೀಯತೆ/ಜಾತಿ/ವರ್ಗ/ಆರ್ಥಿಕ ಸ್ಥಿತಿಯನ್ನು ಅವಲಂಬಿಸಬಾರದು.
4. ತುರ್ತು ಪರಿಸ್ಥಿತಿಯಲ್ಲಿ ರೋಗಿಯ ನೋವು ಸಂಕಟವನ್ನು ನಿವಾರಿಸುವುದು ವೈದ್ಯರ, ಶುಶ್ರೂಷಕರ ಮತ್ತು ಇತರೆ ಸಿಬ್ಬಂದಿ ವರ್ಗದವರ ಆದ್ಯ ಕರ್ತವ್ಯವಾಗಿರುತ್ತದೆ.
5. ಸಾರ್ವಜನಿಕ ಆರೋಗ್ಯ ಸಂಸ್ಥೆಗಳು ತುರ್ತು ಚಿಕಿತ್ಸೆಗೆ ಒಳಪಡುವ ರೋಗಿಗಳಿಗೆ ಸಂಬಂಧಿಸಿದ ಅಗತ್ಯ ದಾಖಲೆಗಳನ್ನು 2-3 ದಿನಗಳ ಒಳಗಾಗಿ ಒದಗಿಸಲು ಅವಕಾಶ ನೀಡತಕ್ಕದ್ದು.

ಮುಂದಿನ ದಿನಗಳಲ್ಲಿ ತುರ್ತು ಚಿಕಿತ್ಸೆಗಾಗಿ ದಾಖಲಾಗುವ ರೋಗಿಗಳು ಸಂಬಂಧಿಸಿದ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣದಿಂದಾಗಿ ಚಿಕಿತ್ಸೆ ನೀಡುವುದನ್ನು ನಿರಾಕರಿಸಿದಲ್ಲಿ, ಸಂಬಂಧಪಟ್ಟ ಆಸ್ಪತ್ರೆಯ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ/ಇತರೆ ಸಿಬ್ಬಂದಿಗಳನ್ನು ನೇರ ಜವಾಬ್ದಾರರನ್ನಾಗಿಸಿ, ಅದು ಅವರು ಎಸಗಿರುವ ದುರ್ನಡತೆ ಎಂದು ಪರಿಗಣಿಸಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ.

**(ಟಿ. ಕೆ. ಅನಿಲ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

**ಇವರಿಗೆ:-**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.
2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯಸೌಧ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.

...2

4. ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು/ಜಿಲ್ಲಾ ಶಸ್ತ್ರಚಿಕಿತ್ಸಕರು-ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು-ಇವರ ಮುಖಾಂತರ.
5. ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳು/ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳು/ಸಮುದಾಯ ಆರೋಗ್ಯ ಕೇಂದ್ರಗಳು/ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಛೇರಿ ಮುಖ್ಯಸ್ಥರಿಗೆ - ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು-ಇವರ ಮುಖಾಂತರ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.